# ಮಾನ್ಯವಿಧಾನ ಪರಿಷತ್ತು ಸದಸ್ಯರಾದ ಶ್ರೀಎಂ.ನಾಗರಾಜು ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ

**ವಿಷಯ:** ದಿನಾಂಕ:04.02.2024ರ ಟೈಮ್ಸ್ ಆಫ್ ಇಂಡಿಯಾ ದಿನ ಪತ್ರಿಕೆಯಲ್ಲಿ 'ಉತ್ತರಕ ನಾರ್ಟಕದಲ್ಲಿ ಕ್ಯಾನ್ಸರ್ ಪ್ರಕರಣಗಳಲ್ಲಿ ಆತಂಕಕಾರಿ ಏರಿಕೆ ಕಂಡುಬರುತ್ತಿದ್ದು, ಜನಜಾಗೃತಿ ಮೂಡಿಸಬೇಕಿದೆ' ಎಂಬ ವಿಚಾರವು ವರದಿ ಆಗಿರುತ್ತದೆ.

ಫೆಬ್ರುವರಿ 4ರಂದು ವಿಶ್ವಕ್ಯಾನ್ಸರ್, ದಿನ ಸಮೀಪಿಸುತ್ತಿರುವಂತೆಯೇ ಉತ್ತರ ಕರ್ನಾಟಕ ಭಾಗದಲ್ಲಿ ಕ್ಯಾನ್ಸರ್ ಪ್ರಕರಣಗಳು ಗಣನೀಯವಾಗಿ ಹೆಚ್ಚಾಗುತ್ತಿವೆ. ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕಿಮ್ಸ್) ಆಸ್ಪತ್ರೆಯಲ್ಲಿ ಪ್ರತಿದಿನ 45 ರಿಂದ 90 ರೋಗಿಗಳು ವಿಕಿರಣ ಚಿಕಿತ್ಸೆಯನ್ನು ಪಡೆಯುತ್ತಿದ್ದಾರೆ ಎಂದು ವರದಿ ಮಾಡಿದೆ. ಈ ಆಂತಕಕಾರಿ ಹೆಚ್ಚಳವು ಸಾರ್ವಜನಿಕರಲ್ಲಿ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸುವ ತುರ್ತು ಅಗತ್ಯವನ್ನು ಒತ್ತಿ ಹೇಳುತ್ತಿದೆ.

ಎನ್‌ಕೆ ಪ್ರದೇಶದಲ್ಲಿ ಕ್ಯಾನ್ಸರ್ ಆಸ್ಪತ್ರೆಗಳ ಕೊರತೆಯಿಂದಾಗಿ ಕಿಮ್ಸ್ ಹುಬ್ಬಳ್ಳಿಗೆ ರೋಗಿಗಳ ಸಂಖ್ಯೆ ಹೆಚ್ಚುತ್ತಿದೆ. ಎನ್‌ಕೆ ಪ್ರದೇಶದಲ್ಲಿ ಕೇವಲ ಎರಡು ಸರ್ಕಾರಿ ಸಂಸ್ಥೆಗಳು ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿವೆ. ಕಲಬುರಗಿಯಲ್ಲಿರುವ ಕಿದ್ವಾಯಿ ಮೆಮೋರಿಯಲ್ ಇನ್‌ಸ್ಟಿಟ್ಯೂಟ್ ಆಫ್ ಆಂಕೋಲಾಜಿ (KMIO) ಮತ್ತು ಕಿಮ್ಸ್ ಹುಬ್ಬಳ್ಳಿ ಇದೀಗ ಕ್ಯಾನ್ಸರ್ ಚಿಕಿತ್ಸೆಗಳನ್ನು ನಿರ್ವಹಿಸುತ್ತಿವೆ ಎಂಬ ಸುದ್ದಿ ಕುರಿತು ಸರ್ಕಾರದ ಮಟ್ಟದಲ್ಲಿ ತೀರ್ಮಾನ ಕೈಗೊಂಡು ಉತ್ತರ ಕರ್ನಾಟಕ ಭಾಗಕ್ಕೆ ಮುಂಬರುವ ಆಯವ್ಯಯದಲ್ಲಿ ಮತ್ತಷ್ಟು ಕ್ಯಾನ್ಸರ್ ಆಸ್ಪತ್ರೆಗಳನ್ನು ನಿರ್ಮಿಸಲು ಕೋರಿ.

******

ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಮೇಲ್ವಿಚಾರಣೆ ಯೊಂದಿಗೆ ಕಲಬುರಗಿಯಲ್ಲಿ ಪೆರಿಫೆರಲ್ ಕ್ಯಾನ್ಸರ್ ಕೇಂದ್ರವನ್ನು, 80 ಹಾಸಿಗೆಗಳ ಸಾಮರ್ಥ್ಯದೊಂದಿಗೆ 1990 ರಲ್ಲಿ ಸ್ಥಾಪಿಸಲಾಗಿದ್ದು, ಪ್ರಸ್ತುತ ಇಲ್ಲಿಗೆ ವಾರ್ಷಿಕವಾಗಿ 6385 ಹೊಸ ರೋಗಿಗಳು, ಅನುಸರಣೆಗಾಗಿ 8318 ರೋಗಿಗಳು ಬರುತ್ತಾರೆ. ಬಿಪಿಎಲ್ ಕಾರ್ಡ್‌ದಾರರಿಗೆ ಉಚಿತ ಚಿಕಿತ್ಸೆಯನ್ನು ಸರ್ಕಾರದ ವಿವಿಧ ಯೋಜನೆಗಳಡಿ ಅನುಷ್ಠಾನಗೊಳಿಸಲಾಗಿದ್ದು, ಇಲ್ಲಿ ಕ್ಯಾನ್ಸರ್ ಚಿಕಿತ್ಸೆಗೆ ಅವಶ್ಯಕವಾದ ರೇಡಿಯೇಷನ್ ಆಂಕಾಲಜಿ, ಸರ್ಜಿಕಲ್ ಆಂಕಾಲಜಿ, ಮೆಡಿಕಲ್ ಆಂಕಾಲಜಿ, ಪ್ಯಾಲಿಯೇಟೀವ್ ಕೇರ್, ರೇಡಿಯಾಲಜಿ, ಅನಸ್ತೇಷಿಯಾಲಜಿ ಹಾಗೂ ಪೆಥಾಲಜಿ ಹೀಗೆ ಕ್ಯಾನ್ಸರ್ ಚಿಕಿತ್ಸೆಯ ವಿವಿಧ ವಿಭಾಗಗಳು ಲಭ್ಯವಿರುತ್ತವೆ. ಬ್ರಾಕಿಥೆರಪಿ ಹಾಗೂ ಪೆಟ್ ಸಿಟಿ ಸ್ಕ್ಯಾನ್ಗಳನ್ನು ಸದ್ಯದಲ್ಲಿಯೇ ಪ್ರಾರಂಭಿಸಲಾಗುವುದು.

ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ ಇಲ್ಲಿಯೂ ಸಹ ಕ್ಯಾನ್ಸರ್ ರೋಗಿಗಳಿಗೆ ಅವಶ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ಸಮರ್ಪಕವಾಗಿ ಒದಗಿಸಲಾಗುತ್ತಿದೆ.

ಬೆಳಗಾವಿ ಜಿಲ್ಲೆ ಹಾಗೂ ಸುತ್ತಮುತ್ತಲಿನ ಕ್ಯಾನ್ಸರ್ ರೋಗಿಗಳ ಹಿತದೃಷ್ಟಿಯಿಂದ 2022-23ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ ಈ ಸಂಸ್ಥೆಯ ಆವರಣದಲ್ಲಿ ಕಿದ್ವಾಯಿ ಕ್ಯಾನ್ಸರ್ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಮೇಲ್ವಿಚಾರಣೆಯೊಂದಿಗೆ ಪ್ರಾದೇಶಿಕ ಕ್ಯಾನ್ಸರ್ ಕೇಂದ್ರವನ್ನುರೂ.50.00 ಕೋಟಿಗಳ ವೆಚ್ಚದೊಂದಿಗೆ ನಿರ್ಮಿಸಲು ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಕಾಮಗಾರಿಯ ಸಲುವಾಗಿ ರೂ.3.08 ಕೋಟಿಗಳ ಅನುದಾನವನ್ನು ಸಹ ಬಿಡುಗಡೆ ಮಾಡಲಾಗಿರುತ್ತದೆ.

...2

ಕಾರವಾರ ವೈದ್ಯಕೀಯ ಕಾಲೇಜಿನಲ್ಲಿ 450 ಹಾಸಿಗೆಗಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸಿ ಅಲ್ಲಿ ಕ್ಯಾನ್ಸರ್ ರೋಗಿಗಳ ಚಿಕಿತ್ಸೆ ನೀಡುವ ಸಲುವಾಗಿ ಅವಶ್ಯಕ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಯಂತ್ರೋಪಕರಣಗಳ ಖರೀದಿಗಾಗಿ ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಸರಬರಾಜು ಆದೇಶವನ್ನು ನೀಡುವ ಹಂತದಲ್ಲಿದೆ. ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆ ನೀಡಲು ಅವಶ್ಯಕವಿರುವ ತಜ್ಞ ವೈದ್ಯರುಗಳ ನೇಮಕಾತಿ ಮಾಡಿಕೊಳ್ಳಲು ನೇರ ಸಂದರ್ಶನ ಮುಗಿದಿದ್ದು, ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ.

ಮೇಲ್ಕಂಡ ಈಗಾಗಲೇ ಉತ್ತರ ಕರ್ನಾಟಕ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕ್ಯಾನ್ಸರ್ ಆಸ್ಪತ್ರೆಗಳನ್ನು ಹೊರತುಪಡಿಸಿ, ಮತ್ತಷ್ಟು ಕ್ಯಾನ್ಸರ್ ಆಸ್ಪತ್ರೆಗಳನ್ನು ನಿರ್ಮಿಸುವ ಕುರಿತಂತೆ ಅನುದಾನ ಲಭ್ಯತೆಯ ಮಿತಿಗೊಳಪಟ್ಟು ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

**ಸಂಖ್ಯೆ**:ಎಂಇಡಿ 40ಕೆಯುಎಂ 2024

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.